## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 64 ಇಎಸ್‌ಟಿ (7) 2013 / 971

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 13-06-2013.

### ಸುತ್ತೋಲೆ

ವಿಷಯ: ಸಿಬ್ಬಂದಿಗಳ ಚಲನವಲನ ವಹಿ ಮತ್ತು ಇತರೆ ದಾಖಲಾತಿಗಳ ನಿರ್ವಹಣೆ ಹಾಗೂ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಮತ್ತು ಹೊಸದಾಗಿ ಹುದ್ದೆಗಳನ್ನು ಸೃಜಿಸುವ ಬಗ್ಗೆ ಪ್ರಸ್ತಾವನೆಗಳನ್ನು ಸಲ್ಲಿಸುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂ: ಡಿಪಿಆರ್/87/ಎಎಆರ್/89, ದಿ; 27-7-1989.

- * * -

ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸದ ವೇಳೆಯಲ್ಲಿ ಸಿಬ್ಬಂದಿಯವರು ಲಭ್ಯವಿಲ್ಲದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರಿಗೆ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿರುವುದರಿಂದ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಮತ್ತು ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ/ ಪಾಲಿಟೆಕ್ನಿಕ್‌ಗಳ/ ಕಿರಿಯ ತಾಂತ್ರಿಕ ಶಾಲೆಗಳ/ ಸರ್ಕಾರಿ ಚಿತ್ರಕಲಾ ಶಾಲೆಗಳ ಹಾಗೂ ಫೈನ್ ಆರ್ಟ್ಸ್ ಕಾಲೇಜುಗಳ ಅಧಿಕಾರಿ/ಸಿಬ್ಬಂದಿಗಳು ಕಛೇರಿ ಕೆಲಸದ ಸಲುವಾಗಿ ನ್ಯಾಯಾಲಯ/ ಇತರೆ ಇಲಾಖೆಯ ಕಛೇರಿಗಳಿಗೆ ಹೋಗುವ ಅಧಿಕಾರಿ/ಸಿಬ್ಬಂದಿಗಳ ಚಲನವಲನಗಳ ಬಗ್ಗೆ **"ಚಲನವಲನ ವಹಿ"**ಯನ್ನು ಉಲ್ಲೇಖದ ಸರ್ಕಾರದ ಸುತ್ತೋಲೆಯಂತೆ **ಕಡ್ಡಾಯವಾಗಿ** ನಿರ್ವಹಿಸಲು ಪ್ರಾಚಾರ್ಯರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಅಲ್ಲದೆ, ನಿರ್ದೇಶನಾಲಯ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಪಾಲಿಟೆಕ್ನಿಕ್/ ಕಿರಿಯ ತಾಂತ್ರಿಕ ಶಾಲೆ/ಸರ್ಕಾರಿ ಚಿತ್ರಕಲಾ ಶಾಲೆಗಳು ಹಾಗೂ ಫೈನ್‌ಆರ್ಟ್ಸ್ ಕಾಲೇಜುಗಳಲ್ಲಿನ ಸಿಬ್ಬಂದಿಗಳು ಪ್ರತಿ ದಿನ ಅವರು ನಿರ್ವಹಿಸಿದ ಕಾರ್ಯಗಳು ಹಾಗೂ ಬಾಕಿ ಇರುವ ಕೆಲಸಗಳ ಪಟ್ಟಿಗಳನ್ನು (Job Chart) ಸಿದ್ಧಪಡಿಸುವುದು, ಈ ಬಗ್ಗೆ ಸಂಸ್ಥೆಯ ಪ್ರಾಚಾರ್ಯರು ನಿಗಾ ವಹಿಸಿ ಆಡಳಿತವನ್ನು ಚುರುಕುಗೊಳಿಸಲು ಸೂಚಿಸಲಾಗಿದೆ. ಮಾನ್ಯ ಉನ್ನತ ಶಿಕ್ಷಣ ಸಚಿವರು/ ನಿರ್ದೇಶನಾಲಯದ ಇಲಾಖಾ ಅಧಿಕಾರಿಗಳು, ಸಂಸ್ಥೆಗೆ ಅನಿರೀಕ್ಷಿತವಾಗಿ ಭೇಟಿ ನೀಡಿದಾಗ ಚಲನವಲನಗಳ ವಹಿ ಮತ್ತು ನಿರ್ವಹಿಸಿದ ಕಾರ್ಯಗಳ ಹಾಗೂ ಬಾಕಿಯಿರುವ ಕೆಲಸಗಳ ಪಟ್ಟಿಗಳನ್ನು ಪರಿಶೀಲನೆಗಾಗಿ ಒದಗಿಸತಕ್ಕದ್ದು.

......2

ನಿರ್ದೇಶನಾಲಯ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ ಪಾಲಿಟೆಕ್ನಿಕ್‌ಗಳು/ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಇಲಾಖಾ ಮುಖ್ಯಸ್ಥರಿಗೆ ಅಗತ್ಯ ಮಾಹಿತಿಗಳೊಂದಿಗೆ ಸೂಕ್ತ ಪ್ರಸ್ತಾವನೆಗಳನ್ನು ಒಂದು ವಾರದೊಳಗಾಗಿ ಕಳುಹಿಸಲು ಸೂಚಿಸಲಾಗಿದೆ.

ಹಾಗೂ ಹೊಸದಾಗಿ ಪ್ರಾರಂಭಗೊಂಡಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಬೋಧಕ/ ಬೋಧಕೇತರ ಹುದ್ದೆಗಳನ್ನು ಹೊಸದಾಗಿ ಸೃಜಿಸುವ ಸಲುವಾಗಿ ಅಗತ್ಯ ಮಾಹಿತಿಗಳೊಂದಿಗೆ ಸೂಕ್ತ ಪ್ರಸ್ತಾವನೆಗಳನ್ನು ಒಂದು ವಾರದೊಳಗಾಗಿ ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸಲು ಸೂಚಿಸಲಾಗಿದೆ.

ನಿರ್ದೇಶನಾಲಯದ ಅಧೀಕ್ಷಕರುಗಳು ಅವರಿಗೆ ಸಂಬಂಧಪಟ್ಟ ವಿಭಾಗಗಳಲ್ಲಿ ಚಲನವಲನ ವಹಿಯನ್ನು ನಿರ್ವಹಿಸುವುದು ಮತ್ತು ಪ್ರತಿ ಹದಿನೈದು ದಿನಗಳಿಗೆ ಒಮ್ಮೆ ಆಡಳಿತಾಧಿಕಾರಿಯವರ ಅವಗಾಹನೆಗೆ ತರುವುದು.

**ಕರಡು ನಿರ್ದೇಶಕರಿಂದ ಅನುಮೋದಿಸಿದೆ.**

ನಿರ್ದೇಶಕರು

**ಇವರಿಗೆ**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಮಾನ್ಯ ಉನ್ನತ ಶಿಕ್ಷಣ ಶಿಕ್ಷಣ ಸಚಿವರ ಗಮನಕ್ಕೆ ತರುವುದು.
2. ಮಾನ್ಯ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ [ಉನ್ನತ ಶಿಕ್ಷಣ], ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇವರಿಗೆ ಮಾಹಿತಿಗಾಗಿ.
3. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ/ಸರ್ಕಾರಿ ಪಾಲಿಟೆಕ್ನಿಕ್‌ಗಳ/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ/ ಸರ್ಕಾರಿ ಚಿತ್ರಕಲಾ ಶಾಲೆಗಳು/ ಫೈನ್ ಆರ್ಟ್ಸ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
5. ಇ-ಆಡಳಿತ ಘಟಕಕ್ಕೆ- ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.